ಅಪರ  ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 8992/2022

ಸಿ.ಡಬ್ಲ್ಯೂ -05
ಪಿ.ಡಬ್ಲ್ಯೂ-04

ಸಾಕ್ಷಿದಾರನ ಹೆಸರು :- ನಾಗರಾಜ
ತಂದೆಯ ಹೆಸರು :- ಜಯರಾಮ
ವಯಸ್ಸು :- 55 ವರ್ಷ
ಉದ್ಯೋಗ :- ವ್ಯವಸಾಯ
ವಾಸ :- ಬಿಚನಹಳ್ಳಿ

**ಸಾಕ್ಷಿಗೆ ದಿಃ 09.02.2026 ರಂದು ಪ್ರಮಾಣ ವಚನ ಬೋದಿಸಲಾಯಿತು.**
**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಆರೋಪಿತರ ಪರಿಚಯ ಇರುತ್ತದೆ. ಚಾಸಾ 1 ರಿಂದ 3 ನನಗೆ ಗೊತ್ತು. ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ ನಾನು ಪೋಲಿಸರು ಮುಂದೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 23.06.2022 ರಂದು ಸಂಜೆ 6 ಗಂಟೆಯ ಸಮಯದಲ್ಲಿ ನಮ್ಮ ಊರಿನ ಚಾಸಾ 2 ಅವರ ಮನೆಯ ಹತ್ತಿರದ ರಸ್ತೆಯಲ್ಲಿ ನಾನು ಮತ್ತು ಚಾಸಾ 4 ಮಾತನಾಡುತ್ತಾ ನಿಂತಿರುವಾಗ ಆರೋಪಿತರು ಗುಂಪು ಕಟ್ಟಿಕೊಂಡು ಅವರ ಮನೆ ಹತ್ತಿರ ಬಂದಿದ್ದು ಲೋಕೇಶ್ ಮತ್ತು ರಾಜಣ್ಣ ಚಾಸಾ 2 ಅವರ ಮನೆಯ ಒಳಗೆ ಅಕ್ರಮವಾಗಿ ನುಗ್ಗಿ ಚಾಸಾ 1 ಅವರಿಗೆ ಅವಾಚ್ಯ ಶಬ್ದಗಳಿಂದ ಬೈದು ನಮ್ಮ ಹುಡುಗಿ ಸ್ಪೂರ್ತಿ ಮನೆ ಬಿಟ್ಟು ಹೋಗಲು ನೀನೆ ಕಾರಣವೆಂದು ಬೈಯುತ್ತಾ ಅವರನ್ನು ಮನೆಯಿಂದ ಹೊರಗಡೆ ದರದರ ಎಳೆದುಕೊಂಡು ಬಂದಿದ್ದು ಬುಗರಿ ರಾಜಣ್ಣ ಚಾಸಾ 1 ಅವರಿಗೆ ಕಪಾಳಕ್ಕೆ ಹೊಡೆದಿದ್ದು ಲೋಕೇಶ್ ದೊಣ್ಣೆಯಿಂದ ಬಲಗೈ ಭುಜ ತೋಲು, ತಲೆ ಮತ್ತು ಕಾಲಿಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ ಮುಡಲಗಿರಿಯ್ಯ, ಲಕ್ಷ್ಮಮ್ಮಾ, ರವಿ, ಚನ್ನಕೇಶವ್ ಚಂದ್ರಮ್ಮ, ಪುಟ್ಟಮ್ಮಾ ಚಾಸಾ 1 ಅವರನ್ನು ಕಳೆಗೆ ಹಾಕಿ ಕಾಲಿನಿಂದ ತುಳಿದಿರುತ್ತಾರೆ ಎಂದರೆ ಸರಿಯಲ್ಲ.

ನಂತರ ಆರೋಪಿ 6 ರಿಂದ 8 ಚಾಸಾ 1 ಅವರು ದರಿಸಿದ್ದ ಸೀರೆಯನ್ನು ಎಳೆದಾಡಿದ್ದು ಚಾಸಾ 2 ಮತ್ತು 3 ಜಗಳ ಬಿಡಿಸಲು ಹೋದಾಗ ಲೋಕೇಶ್, ರಾಜಣ್ಣ ಚನ್ನಕೇಶವ್ ಮತ್ತು ರವಿ ಕೈಗಳಿಂದ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ 1 ಅವರಿಗೆ ಸೀಮೆಎಣ್ಣೆ ಹಾಕಿ ಬೆಂಕಿ ಹಾಕಿರೋ ಎಂದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ನಾನು ಮತ್ತು ಚಾಸಾ 4 ಜಗಳ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ದಿಃ 28.06.2022 ರಂದು ನಾನು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 4 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್